ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 05-03-2021 ಪ್ರಶ್ನೆ ಸಂಖ್ಯೆ : 630 (642)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಹೆಚ್.ಎಂ. ರಮೇಶಗೌಡ(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 05-03-2021

ಉತ್ತರಿಸುವ ಸಚಿವರು: ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ವಿಷಯ : `ಮಿಷನ್ ಅಂತ್ಯೋದಯ' ಮತ್ತು "ಜನರ ಯೋಜನೆ ಜನರ ಅಭಿವೃದ್ಧಿ" ಮತ್ತು ನಮ್ಮ ಗ್ರಾಮ ನಮ್ಮ ಯೋಜನೆ ಬಗ್ಗೆ

(ಅ) `ಮಿಷನ್ ಅಂತ್ಯೋದಯ' ಮತ್ತು "ಜನರ ಯೋಜನೆ ಜನರ ಅಭಿವೃದ್ಧಿ" ಹಾಗೂ 2020-2021ರ "ನಮ್ಮ ಗ್ರಾಮ ನಮ್ಮ ಯೋಜನೆ" ಕಾರ್ಯಕ್ರಮಕ್ಕೆ ಮೀಸಲಿಟ್ಟ ಹಣವೆಷ್ಟು ; (ಮಾಹಿತಿ ನೀಡುವುದು)

(ಆ) ಈ ಸಂಬಂಧ ನೋಡೆಲ್ ಅಧಿಕಾರಿಗಳು ಮತ್ತು ಮೇಲ್ವಿಚಾರಣಾ ಅಧಿಕಾರಿಗಳ ತರಬೇತಿ ಪೂರ್ಣವಾಗಿದೆಯೇ ; ಪೂರ್ಣಗೊಂಡಿದ್ದಲ್ಲಿ, ಇದಕ್ಕೆ ವೆಚ್ಚವಾದ ಹಣವೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಪ್ರಸಕ್ತ ಸಾಲಿನಲ್ಲಿ ರಾಜ್ಯದ ವಿವಿಧ ಗ್ರಾಮಾಭಿವೃದ್ಧಿ ಯೋಜನೆಗಳಿಗೆ ಮೀಸಲಿಟ್ಟ ಹಾಗೂ ಖರ್ಚಾದ ಹಣವೆಷ್ಟು ; ಎಷ್ಟು ಪ್ರಗತಿ ಸಾಧಿಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಪ್ರಸಕ್ತ ಸಾಲಿನಲ್ಲಿ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿ ರಾಜ್ಯದ ಎಷ್ಟು ಗ್ರಾಮಗಳು ನಿಗಧಿತ ಗುರಿ ಪೂರೈಸಿವೆ ; ಉದ್ಯೋಗ ಖಾತ್ರಿ ಯೋಜನೆಯಡಿ ಎಷ್ಟು ಮೊತ್ತದ ಕಾಮಗಾರಿಗಳು ಪೂರ್ಣಗೊಂಡಿವೆ ; (ಅಂಕಿ ಅಂಶ ಸಹಿತ ಮಾಹಿತಿ ನೀಡುವುದು)

(ಉ) ವಲಸೆ ಕೂಲಿ ಕಾರ್ಮಿಕರಿಗೆ ಉದ್ಯೋಗ ಖಾತ್ರಿ ಯೋಜನೆಯಡಿ ಕೆಲಸ ನೀಡಬೇಕೆನ್ನುವ ಆದೇಶದ ಅನ್ವಯ ಎಷ್ಟು ವಲಸಿಗ ಕೂಲಿ ಕಾರ್ಮಿಕರಿಗೆ ಕೆಲಸ ನೀಡಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)